ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಮೀನುಮರಿ ಉತ್ಪಾದನೆ ಕೇಂದ್ರ ಸ್ಥಾಪಿಸುವ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

247 (339) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಕೆ ನಡೆಸಲು ಲಭ್ಯವಿರುವ ಮೀನುಗಾರಿಕೆ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗೊಳಪಡುವ ಜಲ ಸಂಪನ್ಮೂಲಗಳು ಯಾವುವು; (ಮಾಹಿತಿ ನೀಡುವುದು) ಸದರಿ ಜಲಸಂಪನ್ಮೂಲಗಳನ್ನು ಯಾವ ರೀತಿ ಅಭಿವೃದ್ಧಿ ಪಡಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಲಸಂಪನ್ಮೂಲಗಳನ್ನು ಅಭಿವೃದ್ಧಿಪಡಿಸಲು ವಾರ್ಷಿಕವಾಗಿ ಅಗತ್ಯವಿರುವ ಮೀನುಮರಿಗಳ ಪ್ರಮಾಣ ಎಷ್ಟು ಮತ್ತು ಹಾಸನ ಜಿಲ್ಲೆಗೆ ಇಲಾಖೆಯಿಂದ ವಾರ್ಷಿಕವಾಗಿ ಸರಬರಾಜು ಆಗುತ್ತಿರುವ ಮೀನುಮರಿಗಳ ಪ್ರಮಾಣವೆಷ್ಟು ; (ಕಳೆದ 3 ವರ್ಷಗಳ ಮಾಹಿತಿ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಮೀನುಗಾರಿಗಳಿಗೆ ಬಹಳ ಬೇಡಿಕೆ ಇದ್ದು, ಮೀನುಮರಿ ಉತ್ಪಾದನೆ ಮಾಡಲು ಅನುಕೂಲಕರ ಸ್ಥಳಗಳಿದ್ದರೂ ಸಹ ಜಿಲ್ಲೆಯಲ್ಲಿ ಮೀನುಮರಿ ಉತ್ಪಾದನೆ ಕೇಂದ್ರ ಸ್ಥಾಪನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಪ್ರದೇಶದಲ್ಲಿ ಮೀನುಮರಿ ಉತ್ಪಾದನಾ ಕೇಂದ್ರ ಸ್ಥಾಪನೆ ಮಾಡಲಾಗುವುದು; ಯಾವ ಕಾಲಮಿತಿಯೊಳಗೆ ಉತ್ಪಾದನಾ ಕೇಂದ್ರ ಮಾಡಿ ರೈತರಿಗೆ ಮೀನುಮರಿಗಳನ್ನು ಸರಬರಾಜು ಮಾಡಲಾಗುವುದು ? (ವಿವರ ನೀಡುವುದು)